ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 15ನೇ ಫೆಬ್ರವರಿ, 2013
(ಸಮಯ: ಬೆಳಗ್ಗೆ 10.00 ಗಂಟೆಗೆ)

1. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಸಿದ್ಧರಾಮಯ್ಯ ಅವರು 2002-03ರಿಂದ 2012-13ನೇ ಸಾಲಿನವರೆವಿಗೂ ಬೆಂಗಳೂರಿನ (ನಗರ) ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಥಮ ದರ್ಜೆ/ ದ್ವಿತೀಯ ದರ್ಜೆ ಸಹಾಯಕರಿಗೆ ಮಾಸಿಕ ವೇತನವನ್ನು ಹೆಚ್ಚಿಸುವ ಬಗ್ಗೆ ಹಾಗೂ ಸದರಿ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳನ್ನು ಖಾಯಂ ಮಾಡದಿರುವುದರಿಂದ ಉಂಟಾಗಿರುವ ತೊಂದರೆ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಸೈಯದ್ ಯಾಸೀನ್ ಅವರು ರಾಯಚೂರು ನಗರಕ್ಕೆ ಕುಡಿಯುವ ನೀರನ್ನು ಒದಗಿಸುವ ಹಾಗೂ ರಾಯಚೂರು ಉಷ್ಣ ವಿದ್ಯುತ್ ಕೇಂದ್ರ ಯರಮರಸ್ ಉಷ್ಣ ವಿದ್ಯುತ್ ಕೇಂದ್ರ ಮತ್ತು ಯಡ್ಲಾಪುರ ಉಷ್ಣ ವಿದ್ಯುತ್ ಕೇಂದ್ರ ಯೋಜನೆಗಳ ಉಳಿವಿಗಾಗಿ ಕೃಷ್ಣಾ ನದಿಯ ಹಿನ್ನೀರಿನಿಂದ ನೀರನ್ನು ಒದಗಿಸಲು ಮೂರನೇ ಮಾರ್ಗದ ಮಂಜೂರಾತಿ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3. ಶ್ರೀ ಕೆ. ದಿನಕರ ಶೆಟ್ಟಿ ಅವರು ಕುಮಟ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಸವ ಮತ್ತು ಮತ್ಸ್ಯ ಆಶ್ರಯ ವಸತಿ ಯೋಜನೆಯಡಿ ನಗರ ಪ್ರದೇಶಗಳಲ್ಲಿನ ವಸತಿ ಹೀನ ಬಡವರಿಗೆ ಮನೆಗಳನ್ನು ಕಟ್ಟಿಕೊಳ್ಳಲು ಅವಕಾಶ ನೀಡುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

4. ಶ್ರೀ ಎನ್, ಸಂಪಂಗಿ ಅವರು ಬಾಗೇಪಲ್ಲಿ ವಿಧಾನ ಸಭಾ ಕ್ಷೇತ್ರದ ಗುಡಿಬಂಡೆ ತಾಲ್ಲೂಕಿನ ವರಲಕೊಂಡ ಮತ್ತು ಅಪ್ಪಿರೆಡ್ಡಿಪಲ್ಲಿ ಗ್ರಾಮಗಳಿಗೆ ಹೊಂದಿಕೊಂಡಿರುವ ಬೆಟ್ಟದಲ್ಲಿ ಗಣಿಗಾರಿಕೆ ರದ್ದು ಮಾಡದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5.ಶ್ರೀ ನೆ.ಲ. ನರೇಂದ್ರ ಬಾಬು ಅವರು ಕರ್ನಾಟಕ ಅರ್ಬನ್ ಹೌಸಿಂಗ್ ಸೊಸೈಟಿಯಲ್ಲಿ ನಡೆದ ಅವ್ಯವಹಾರದ ತನಿಖೆಗಾಗಿ ಸಿ.ಓ.ಡಿ.ಗೆ ವಹಿಸಲಾಗಿದ್ದು, ತನಿಖೆ ಕಾರ್ಯ ವಿಳಂಬವಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಮು.ತಿ.ನೋ.,

6. ಶ್ರೀ ವೈ. ಎನ್. ರುದ್ರೇಶಗೌಡ ಅವರು ಬೇಲೂರು ತಾಲ್ಲೂಕು ಯಗಚಿ ಜಲಾಶಯ ಹಿನ್ನೀರಿನಿಂದ ಕೆಲವು ಗ್ರಾಮಗಳು ಮುಳುಗಡೆಯಾಗಿದ್ದು, ಅಲ್ಲಿನ ಸಂತ್ರಸ್ತರಿಗೆ ಜಮೀನಿನ ಬದಲಿಗೆ ಪರಿಹಾರ ಧನವನ್ನು ನೀಡುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರಾದ ಸುನೀಲ್ ವಿ. ಹೆಗಡೆ, ಬಂಡೆಪ್ಪ ಕಾಶೆಂಪುರ, ಹೆಚ್.ಸಿ. ಬಾಲಕೃಷ್ಣ, ವೆಂಕಟರಾವ್ ನಾಡಗೌಡ ಹಾಗೂ ಶ್ರೀಮತಿ ಅನಿತಾ ಕುಮಾರಸ್ವಾಮಿ ಮತ್ತು ಶ್ರೀಮತಿ ಕಲ್ಪನಾ ಸಿದ್ಧರಾಜು ಮತ್ತು ಇತರರು ಕೆಲವು ಹೋಬಳಿ ಕೇಂದ್ರಗಳನ್ನು ತಾಲ್ಲೂಕು ಕೇಂದ್ರಗಳನ್ನಾಗಿ ಪರಿವರ್ತಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶ್ರೀ ಎಂ.ಟಿ. ಕೃಷ್ಣಪ್ಪ ಅವರು ತುಮಕೂರು ಜಿಲ್ಲೆ ತುರುವೇಕೆರೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಉದಯ ಭಾರತಿ ಪದವಿ ಪೂರ್ವ ಕಾಲೇಜಿನ ಸಿಬ್ಬಂದಿ ವರ್ಗದವರಿಗೆ ವೇತನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9. ಶ್ರೀ ಕಿಮ್ಮನೆ ರತ್ನಾಕರ್ ಅವರು ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಮಳೆ ಯಿಂದ ಆದ ಬೆಳೆ ಹಾನಿ ಮತ್ತು ಸಾರ್ವಜನಿಕ ಆಸ್ತಿ-ಪಾಸ್ತಿಯ ನಷ್ಟದ ಬಗ್ಗೆ ಉಪ ಮುಖ್ಯಮಂತ್ರಿ (ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)ಯವರ ಗಮನ ಸೆಳೆಯುವುದು.

10. ಶ್ರೀ ಸುನಿಲ್ ವಿ ಹೆಗಡೆ ಅವರು ಹಳಿಯಾಳ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸುಮಾರು 12 ರಿಂದ 15 ಸಾವಿರ ಎಕರೆ ಪ್ರದೇಶಕ್ಕೆ ಕಾಳಿ ನದಿಯಿಂದ ಶಾಶ್ವತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಹಾಗೂ ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕುಗಳಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆಯ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

11. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ಜಿಲ್ಲೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಖಾಲಿ ಇರುವ ಉಪನ್ಯಾಸಕರ ಹಾಗೂ ಇತರೆ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

12. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಿನ್ಸಿಪಾಲರು ಮತ್ತು ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

13. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನದಲ್ಲಿರುವ ಸರ್ಕಾರಿ ಪಶು ಸಂಗೋಪನಾ ಕಾಲೇಜಿನಲ್ಲಿ ವೆಟರ್ನರಿ ಕೌನ್ಸಿಲ್ ಆಫ್ ಇಂಡಿಯಾ ನಿಯಮದಂತೆ ಮೂಲಭೂತ ಸೌಕರ್ಯಗಳು ಇಲ್ಲದೇ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪಶುಸಂಗೋಪನಾ ಸಚಿವರ ಗಮನ ಸೆಳೆಯವುದು.

ಮು.ತಿ.ನೋ.,

14. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಖಾಲಿ ಇರುವ ಪ್ರಿನ್ಸಿಪಾಲ್ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

15. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನದ ಸರ್ಕಾರಿ ಕೃಷಿ ಕಾಲೇಜಿನಲ್ಲಿ ಖಾಲಿ ಇರುವ ಉಪನ್ಯಾಸಕರ ಮತ್ತು ಇತರೆ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

16. ಶ್ರೀ ಕಾಕಾಸಾಹೇಬ್ ಪಾಂಡುರಂಗ ಪಾಟೀಲ್ ಅವರು ನಿಪ್ಪಾಣಿ ಹಾಲ್ ಸಿದ್ದನಾಥ ಸಹಕಾರಿ ಸಕ್ಕರೆ ಕಾರ್ಖಾನೆಗೆ ಮಾರ್ಚ್ 2013ರೊಳಗಾಗಿ ಚುನಾವಣೆ ನಡೆಸಲು ಅಲ್ಲಿನ ನಿರ್ದೇಶಕ ಮಂಡಳಿಯು ಕಾನೂನು ಬಾಹಿರವಾಗಿ ಸದಸ್ಯರನ್ನು ನೋಂದಣಿ ಮಾಡಿಕೊಳ್ಳುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

17. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತದಲ್ಲಿ ಗುಮಾಸ್ತರು ಹಾಗೂ ನಗದು ಗುಮಾಸ್ತರ ದರ್ಜೆಯ ಹುದ್ದೆಗಳ ನೇಮಕಾತಿಯಲ್ಲಿ ಆಗಿರುವ ಲೋಪ-ದೋಷಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

18. ಶ್ರೀ ಮಾಲಿಕಯ್ಯ ವೆಂಕಯ್ಯ ಗುತ್ತೇದಾರ್ ಅವರು ಅಫಜಲಪುರ ವಿಧಾನ ಸಭಾ ಕ್ಷೇತ್ರಕ್ಕೆ "ಸುವರ್ಣ ಗ್ರಾಮ" ಯೋಜನೆಯಡಿಯಲ್ಲಿ 2008ರಿಂದ 2013ನೇ ಸಾಲಿನ ವರೆಗೆ ಬಿಡುಗಡೆಯಾದ ಹಣ ಹಾಗೂ ಖರ್ಚಾಗದೆ ಉಳಿದ ಹಣದಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಕಂದಾಯ ಮತ್ತು ಗ್ರಾಮೀಣಾಭಿವೃದ್ಧಿ ಸಚಿವರು)ಯವರ ಗಮನ ಸೆಳೆಯುವುದು.

19. ಶ್ರೀ ಎನ್. ಸಂಪಂಗಿ ಅವರು ನವದೆಹಲಿಯಲ್ಲಿರುವ ಕರ್ನಾಟಕ ಭವನ-1ರಲ್ಲಿ ಶಾಸಕರುಗಳಿಗೆ ಸರಿಯಾದ ಸೌಲಭ್ಯಗಳು ನೀಡದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಯರ ಗಮನ ಸೆಳೆಯುವುದು.

20. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಬಸವ ವಸತಿ ಯೋಜನೆಯಡಿಯಲ್ಲಿ ಆರ್.ಸಿ.ಸಿ. ಮನೆ ನಿರ್ಮಾಣ ಮಾಡುವವರಿಗೆ ಫಲಾನುಭವಿಗಳಾಗಲು ಅವಕಾಶವಿಲ್ಲವಾದ್ದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

21. ಶ್ರೀ ಕೆ.ವಸಂತ ಬಂಗೇರ ಅವರು ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಧರ್ಮಸ್ಥಳ ಗ್ರಾಮದ ಉಜಿರೆ ಎಸ್.ಡಿ.ಎಂ. ಕಾಲೇಜಿನ ವಿದ್ಯಾರ್ಥಿನಿ ಕುಮಾರಿ ಸೌಜನ್ಯಳ ಅತ್ಯಾಚಾರ ಹಾಗೂ ಕೊಲೆ ಕೇಸಿನ ತನಿಖೆಯ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಗೃಹ ಮತ್ತು ಸಾರಿಗೆ ಸಚಿವರು)ಯವರ ಗಮನ ಸೆಳೆಯುವುದು.

ಮು.ತಿ.ನೋ.,

22. ಶ್ರೀ ವೈ.ಎನ್. ರುದ್ರೇಶಗೌಡ ಅವರು ಬಸವ ಇಂದಿರಾ ಯೋಜನೆಯಡಿ ಬೇಲೂರು ವಿಧಾನ ಸಭಾ ಕ್ಷೇತ್ರಕ್ಕೆ ಮಂಜೂರಾಗಿದ್ದು ಮನೆ ಕಟ್ಟಲು ಗ್ರಾಮೀಣ ಭಾಗದಲ್ಲಿ ನೀರಿಲ್ಲದ ಕಾರಣ ಫಲಾನುಭವಿಗಳಿಗೆ ತೊಂದರೆಯಾಗಿದ್ದು ಅನುದಾನ ಬಿಡುಗಡೆ ಮಾಡದಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯವುದು.

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಶ್ರೀಕಾಂತ ಕುಲಕರ್ಣಿ, ಡಾ॥ ಸಾರ್ವಭೌಮ ಬಗಲಿ ಮತ್ತು ಶಿವರಾಜ್ ಎಸ್. ತಂಗಡಗಿ ಇವರುಗಳು ಮಹಾರಾಷ್ಟ್ರ ರಾಜ್ಯದಿಂದ ಕೃಷ್ಣ ಹಾಗೂ ಭೀಮಾ ನದಿಗಳಿಗೆ ನೀರನ್ನು ಬಿಡಿಸುವ ಕುರಿತು ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಡಾ॥ ಸೌರ್ವಭೌಮ ಬಗಲಿ, ಎನ್. ಸಂಪಂಗಿ, ಶಿವರಾಜ್ ತಂಗಡಗಿ, ಗೂಳಿಹಟ್ಟಿ ಶೇಖರ್ ಹಾಗೂ ಇತರರು ರಾಜ್ಯದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯ ಕೊರತೆ ಮತ್ತು ಅಪೌಷ್ಟಿಕ ಆಹಾರ ಪೂರೈಕೆಯಾಗುತ್ತಿರುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಡಾ॥ ಶರಣ ಪ್ರಕಾಶ್ ಪಾಟೀಲ್, ವೆಂಕಟರಾವ್ ನಾಡಗೌಡ, ಮಾಲಿಕಯ್ಯ ವೆಂಕಯ್ಯ ಗುತ್ತೇದಾರ ಇವರುಗಳು ಕೇಂದ್ರ ಸರ್ಕಾರವು ಇತ್ತೀಚಿಗೆ ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗಾಗಿ ಭಾರತ ಸಂವಿಧಾನಕ್ಕೆ ತಿದ್ದುಪಡಿ ತಂದು ಅನುಚ್ಛೇದ 371(J) ಯನ್ನು ಅಳವಡಿಸಲಾಗಿರುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

3. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ನರೇಂದ್ರಸ್ವಾಮಿ ಪಿ.ಎಂ. ಅವರು "ನಿರಂತರ ವಿದ್ಯುತ್ ಸರಬರಾಜು" ಮಾಡುವ ಬಗ್ಗೆ ದಿನಾಂಕ:07.02.2013ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 2ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ 28(172)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಮು.ತಿ.ನೋ.,

4. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I. ವಿಧೇಯಕಗಳನ್ನು ಮಂಡಿಸುವುದು

1. **ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2013**
ಶ್ರೀ ಗೂಳಿಹಟ್ಟಿ ಡಿ. ಶೇಖರ್ **(ವಿಧಾನ ಸಭಾ ಸದಸ್ಯರು) ಅವರು:-**

ಅ) 2013ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ, 2013**
ಶ್ರೀ ಗೂಳಿಹಟ್ಟಿ ಡಿ. ಶೇಖರ್ **(ವಿಧಾನ ಸಭಾ ಸದಸ್ಯರು) ಅವರು:-**

ಅ) 2013ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) **ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2013**
ಶ್ರೀ ಗೂಳಿಹಟ್ಟಿ ಡಿ. ಶೇಖರ್ **(ವಿಧಾನ ಸಭಾ ಸದಸ್ಯರು) ಅವರು:-**

ಅ) ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) **ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ, 2013**
ಶ್ರೀ ಗೂಳಿಹಟ್ಟಿ ಡಿ. ಶೇಖರ್ **(ವಿಧಾನ ಸಭಾ ಸದಸ್ಯರು) ಅವರು:-**

ಅ) ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N